ದಿಃ 18.07.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯವಿಚಾರಣೆಃ ಎದುರುದಾರರ ಪರ ಶ್ರೀ ಕೆ.ಎನ್.ಹೆಚ್ ವಕೀಲರಿಂದ ,**

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿರುವ ಸಂಗತಿಗಳೆಲ್ಲಾ ಸತ್ಯವಿದ್ದು, ಅದನ್ನು ನಾನೇ ಹೇಳಿ ಬರೆಸಿದ್ದೇನೆ ಹಾಗೂ ಪ್ರಮಾಣ ಪತ್ರಕ್ಕೆ ನಾನೇ ಸಹಿ ಮಾಡಿರುತ್ತೇನೆ.

ಈ ದಿವಸ ನಾನು ಕೆಳಕಂಡ ದಾಖಲೆಗಳನ್ನು ಹಾಜರು ಪಡಿಸುತ್ತಿದ್ದೇನೆ.

1. ಪೊಲೀಸ್ ನವರು ನೀಡಿರುವ ಒಂದು ಹಿಂಬರಹವನ್ನು ಹಾಜರು ಪಡಿಸಿದ್ದು ಅದನ್ನು ನಿಆರ್ –02 ಎಂದು ಗುರುತಿಸಲಾಯಿತು.
2. ಎರಡು ಜನನ ಪ್ರಮಾಣಪತ್ರದ ಛಾಯಾಪ್ರತಿಗಳನ್ನು ಹಾಜರು ಪಡಿಸಿದ್ದು ಅದನ್ನು ಒಟ್ಟಾಗಿ ನಿಆರ್–03 ಎಂದು ಗುರುತಿಸಲಾಯಿತು.
3. ಸಾರ್ವಜನಿಕ ಶಿಕ್ಷಣ ಇಲಾಖೆಯವರು ನೀಡಿರುವ ಎರಡು ಪ್ರಗತಿ ಪತ್ರಿಕೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಆರ್–04 ಮತ್ತು ನಿಆರ್–05 ಎಂದು ಗುರುತಿಸಲಾಯಿತು.
4. ಆದಿಚುಂಚನಗಿರಿ ವಿದ್ಯಾಸಂಸ್ಥೆಯವರು ನೀಡಿರುವ ಎರಡು ಪ್ರಗತಿ ಪತ್ರಿಕೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಆರ್–06 ಮತ್ತು ನಿಆರ್–07 ಎಂದು ಗುರುತಿಸಲಾಯಿತು.
5. ಎರಡು ವ್ಯಾಸಂಗ ದೃಢೀಕೃತ ಪ್ರತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಕ್ರಮಾಗಿ ನಿಆರ್–08 ಮತ್ತು ನಿಆರ್–09 ಎಂದು ಗುರುತಿಸಲಾಯಿತು.
6. ಮಕ್ಕಳಿಗಾಗಿ ಖರ್ಚು ಮಾಡಿರುವ 24 ಬಿಲ್ಲುಗನ್ನು ಹಾಜರು ಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಆರ್–10 ಎಂದು ಗುರುತಿಸಲಾಯಿತು.

**ಪಾಟೀ ಸವಾಲಿಗೆ ಸಮಯ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.**

(ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ರಾಘವೇಂದ್ರ. ಡಿ.)
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಭದ್ರಾವತಿ